ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ಕುಸಿದಿರುವುದು

3024:(4001)

ಶ್ರೀ ಡಿ.ವಿ.ಸದಾನಂದಗೌಡ (ಪುತ್ತೂರು): ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕುಸಿದಿರುವ ಅಂತರ್ ಜಲಮಟ್ಟವನ್ನು ಹೆಚ್ಚಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಆ) ಸಣ್ಣ ಹೊಳೆಗಳಿಗೆ ಕಿಂಡಿ ಅಣೆಕಟ್ಟುಗಳನ್ನು ರಚಿಸಲು ಈ ಜಿಲ್ಲೆಗೆ ವಿಶೇಷ ಯೋಜನೆ ರೂಪಿಸಿ, ಹೆಚ್ಚಿನ ಅನುದಾನ ಒದಗಿಸಲಾಗುವುದೇ?

ಇ) ಈ ದಿಸೆಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು):

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕುಸಿಯುತ್ತಿರುವ ಅಂತರ್ಜಲದ ಮಟ್ಟವನ್ನು ಹೆಚ್ಚಿಸುವ ಸಲುವಾಗಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯು ಅಂತರ್ಜಲ ಕೃತಕ ಮರುಪೂರ್ಕೆಯ ರಚನೆಗಳನ್ನು ನಿರ್ಮಾಣ ಮಾಡುವ ಕಾಮಗಾರಿಯನ್ನು ಕೈಗೆತ್ತಿಕೊಂಡಿದೆ. ಮಂಗಲೂರು ಮತ್ತು ಬಂಟ್ವಾಳ ತಾಲ್ಲೂಕುಗಳಲ್ಲಿ ಒಂದೊಂದು ರಚನೆಗಳನ್ನು ಪ್ರಯೋಗಾತ್ಮಕವಾಗಿ ಈಗಾಗಲೇ ನಿರ್ಮಿಸಲಾಗಿದೆ.

ಆ) ವಿಶೇಷ ಯೋಜನೆ ರೂಪಿಸಲಾಗುತ್ತಿದ್ದು, ಹಂತ ಹಂತವಾಗಿ ಆದ್ಯತೆ ಆಧಾರದ ಮೇರೆಗೆ ಮುಂದಿನ ಸಾಲಿನ ಆಯವ್ಯಯದಲ್ಲಿ ಅನುದಾನ ಒದಗಿಸಲು ಕ್ರಮ ತೆಗೆದುಕೊಳ್ಳಲಾಗುವುದು

ಇ) ಕರಾವಳಿ ಜಿಲ್ಲೆಗಳಲ್ಲಿ ನೀರಿನ ಕ್ಷಾಮವನ್ನು ತಪ್ಪಿಸಲು ಸಣ್ಣ ಹಳ್ಳಗಳಿಗೆ ಕಿಂಡಿ ಅಣೆಕಟ್ಟುಗಳನ್ನು ಕಟ್ಟಲು ಒಂದು ಸಮಗ್ರ ಯೋಜನೆಯನ್ನು ಸಣ್ಣ ನೀರಾವರಿ ಇಲಾಖೆ ತಯಾರಿಸುತ್ತಿದೆ. ಈ ಯೋಜನೆ ಅನುಷ್ಠಾನದಿಂದ ಅಂತರ್ಜಲ ಅಭಿವೃದ್ಧಿ, ಕುಡಿಯಲು ನೀರು, ಬೆಳೆಗಳಿಗೆ ನೀರು ಇತ್ಯಾದಿ ಪೂರೈಸಲು ಸಾಧ್ಯವಾಗುವುದು. ಈ ಯೋಜನೆಗೆ ಮುಂದಿನ ಸಾಲಿನಿಂದ ಅನುದಾನ ಒದಗಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಪುತ್ತೂರು ತಾಲ್ಲೂಕು ಕುಮಾರಧಾರ ನದಿಯಿಂದ ಹೊಳೆತ್ತುವುದು